**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.15/2023**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್

-ಃಃ ವಿರುದ್ದ ಃಃ-

ಆರೋಪಿ ಃ ಜಗಧೀಶ ತಂದೆ ಭೀಮರಾಯ ನಾಟೀಕಾರ
ವಃ 40 ವರ್ಷ, ಉಃ ಹೊಟೇಲ ಕೆಲಸ
ಸಾಃ ಇವಣಿ ಗ್ರಾಮ, ತಾಃ ಚಿತ್ತಾಪುರ
ಗ್ರಾಮ ಹಾವಸ್ತಿ ತರನಳ್ಳಿ ಕ್ರಾಸ್ ಸೇಡಂ.

----

**ದೋ ಷಾ ರೋ ಪ ಣೆ**

ನಾನು ಶ್ರೀ ಬಾಲು, ಬಿ.ಎ., ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 26-07-2022 ರಂದು ಸಾಯಂಕಾಲ 04.40 ಗಂಟೆ ಸುಮಾರಿಗೆ ಸೇಡಂ ಪೋಲೀಸ ಠಾಣೆಯ ವ್ಯಾಪ್ತಿಯಲ್ಲಿ ಬರುವ ಸೇಡಂ ಪಟ್ಟಣದ ತರನಳ್ಳಿ ಕ್ರಾಸ್ ಹತ್ತಿರ ಇರುವ ಚಿಂಚೋಳಿಗೆ ಹೋಗುವ ರಸ್ತೆಯ ಪಕ್ಕದಲ್ಲಿರುವ ಆರೋಪಿತನ ಚಹ ಹೊಟೇಲ್ ಹತ್ತಿರ ಆರೋಪಿತನು ತನ್ನ ಹೋಟೇಲ್ ಹತ್ತಿರ ಸಾರ್ವಜನಿಕ ಸ್ಥಳದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾಗ, ಚಾಸಾ.1, 4 ರಿಂದ 5 ರವರು ಕೂಡಿ ಚಾಸಾ.2 ಮತ್ತು 3 ನೆದ್ದವರ ಸಮಕ್ಷಮದಲ್ಲಿ ಏಕಕಾಲಕ್ಕೆ ದಾಳಿ ಮಾಡಿ ಹಿಡಿದು ಆರೋಪಿತನಿಂದ 1) Bagpiper Whisky 180 ML ನ 3 ಮದ್ಯದ ಪೌಚಗಳು 2)Old Tavern 180 ML 7 ಮದ್ಯದ ಪೌಚಗಳು 3) Original Choice 90 ML 52 ಪೌಚಗಳನ್ನು ಜಪ್ತಿಪಡಿಸಿಕೊಂಡದ್ದು ಇರುತ್ತದೆ ಹಾಗೂ ಪ್ರತ್ಯೇಕವಾಗಿ ಜಪ್ತಿ ಮಾಡಿದ ಸದರಿ ಮದ್ಯವನ್ನು ರಸಾಯನಿಕ ಪರೀಕ್ಷೆಗೆ ಒಳಪಡಿಸಲಾಗಿ ಸದರಿ ಮದ್ಯದಲ್ಲಿ Ethyl alcohol ಅಂಶ ಹೊಂದಿರುತ್ತದೆ ಅಂತಾ ವರದಿ ನೀಡಿದ್ದು, ಕಾರಣ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಮತ್ತು 34ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 10-12-2025 ಪ್ರ.ದ.ನ್ಯಾ.ದಂ. ಸೇಡಂ.

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.15/2023**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್

-ಃಃ ವಿರುದ್ದ ಃಃ-

ಆರೋಪಿಃ- ಜಗಧೀಶ ತಂದೆ ಭೀಮರಾಯ ನಾಟೀಕಾರ
ವಃ 40 ವರ್ಷ, ಉಃ ಹೊಟೇಲ ಕೆಲಸ
ಸಾಃ ಇವಣಿ ಗ್ರಾಮ, ತಾಃ ಚಿತ್ತಾಪುರ
ಗ್ರಾಮ ಹಾವಸ್ತಿ ತರನಳ್ಳಿ ಕ್ರಾಸ್ ಸೇಡಂ.

**ಆರೋಪಿತರ ಹೇಳಿಕೆ**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ

ಪ್ರಃ-2) ನಿನ್ನ ತಪ್ಪನ್ನು ಒಪ್ಪಿಕೊಳ್ಳುತ್ತಿಯೊ ಅಥವಾ ವಿಚಾರಣೆ ನಡೆಯಬೇಕಾ?

ಉಃ-

(ದೋಷಾರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕ 10-12-2025 ಪ್ರ.ದ.ನ್ಯಾ.ದಂ. ಸೇಡಂ.